ಈ) ಈಗಾಗಲೇ ವಶಪಡಿಸಿಕೊಂಡಿರುವ 238 ಎಕರೆ ಜಮೀನುಗಳಿಗೆ ಅರ್ಜಿಗಳು ಬಂದಿದ್ದು, ಕೈಗಾರಿಕೋದ್ಯಮಿಗಳಿಂದ ಹೆಚ್ಚಿನ ಜಮೀನುಗಳಿಗೆ ಬೇಡಿಕೆ ಇರುವುದರಿಂದ ಸದರಿ ಕೈಗಾರಿಕಾ ಪ್ರದೇಶದ ಪಕ್ಕದಲ್ಲಿ ಸುಮಾರು 500 ಎಕರೆ ಅಧಿಕ ಜಮೀನುಗಳನ್ನು ಗುರುತಿಸಿ ವಶಪಡಿಸಿಕೊಳ್ಳಲು ಕ್ರಮ ಜರುಗಿಸಲಾಗುವುದು.

746 ಶ್ರೀ ಮಾನಪ್ಪ ವಜ್ಜಲ್ : ಮಾನ್ಯ ಜಲಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಲಿಂಗಸಗೂರು ತಾಲ್ಲೂಕಿನ ಬಸವಸಾಗರ ಜಲಾಶಯವನ್ನು ವೀಕ್ಷಿಸಲು ಬರುವ ಪ್ರವಾಸಿಗರು ಹಾದು ಹೋಗುವ ರಸ್ತೆಗಳು ದುರಸ್ತಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ ಸರ್ಕಾರ ಸೂಕ್ತ ರಸ್ತೆ ನಿರ್ಮಾಣ ಮಾಡಲು ಕ್ರಮ ಕೈಗೊಳ್ಳುವುದೇ?

ಶ್ರೀ ಬಸವರಾಜ ಬೊಮ್ಮಾಯಿ (ಜಲ ಸಂಪನ್ಮೂಲ ಸಚಿವರು) :

ಅ) ಬಂದಿದೆ.

ಆ) ಲಿಂಗಸಗೂರು – ನಾರಾಯಣಪುರ ಹಾಗೂ ಚಿತ್ತಾಪುರ–ಲಿಂಗಸಗೂರು ರಸ್ತೆಗಳು ಬಸವಸಾಗರ ಜಲಾಶಯಕ್ಕೆ ಹಾದು ಹೋಗುವ ಪ್ರಮುಖ ಜಿಲ್ಲಾ ರಸ್ತೆಗಳಾಗಿದ್ದು, ನಿಗಮದಲ್ಲಿ ಪುನರ್ ನಿರ್ಮಾಣ ಕಾಮಗಾರಿಗಾಗಿ ಅಂದಾಜು ತಯಾರಿಸಲಾಗಿದ್ದು, ಅನುದಾನ ಲಭ್ಯತೆಗೆ ಅನುಗುಣವಾಗಿ ತಯಾರಿಸಲಾಗಿದ್ದು, ಅನುದಾನದ ಲಭ್ಯತೆಗೆ ಅನುಗುಣವಾಗಿ ಕಾಮಗಾರಿಗೆ ಅನುದಾನ ಒದಗಿಸಿ ಕೈಗೊಳ್ಳುವುದನ್ನು ಪರಿಶೀಲಿಸಲಾಗುವುದು.

206 ಶ್ರೀ ಜಾರಕಿಹೊಳಿ ಸತೀಶ್ ಲಕ್ಷ್ಮಣರಾವ್ (ಯಮಕನಮರಡಿ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾವಿ ಜಿಲ್ಲೆಯಲ್ಲಿ ಕಿತ್ತೂರು ಅಭಿವೃದ್ಧಿ ಪ್ರಾಧಿಕಾರವು ಸ್ಥಾಪನೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಬಂದಿದ್ದಲ್ಲಿ ಈ ಪ್ರಾಧಿಕಾರದ ವ್ಯಾಪ್ತಿಯಲ್ಲಿ ಬರುವ ಗ್ರಾಮಗಳು ಎಷ್ಟು?

ಇ) ಈ ಪ್ರಾಧಿಕಾರಕ್ಕೆ ಸರ್ಕಾರದಿಂದ ಬಿಡುಗಡೆ ಮಾಡಿರುವ ಹಣವೆಷ್ಟು?

ಈ) ಸದರಿ ಪ್ರಾಧಿಕಾರದ ಸಭೆ ಕರೆಯಲು ವಿಳಂಬವಾಗಿರುವುದಕ್ಕೆ ಕಾರಣಗಳೇನು?

ಶ್ರೀ ಕೆ. ಕರುಣಾಕರ ರೆಡ್ಡಿ (ಕಂದಾಯ ಸಚಿವರು) :

ಅ) ಬಂದಿದೆ.

ಆ) 17 ಗ್ರಾಮಗಳು.

ಇ)

1) 2007–08 ರಲ್ಲಿ ರೂ. 300–00 ಲಕ್ಷ
2) 2008–09 ರಲ್ಲಿ ರೂ. 100–00 ಲಕ್ಷ
3) 2009–10 ರಲ್ಲಿ ರೂ. 200–00 ಲಕ್ಷ

(ಪ್ರಸಕ್ತ ಸಾಲಿನಲ್ಲಿ ರೂ.400–00 ಲಕ್ಷ ಅನುದಾನ ಒದಗಿಸಲಾಗಿದ್ದು, ಇದುವರೆಗೆ ರೂ.200–00 ಲಕ್ಷ ಬಿಡುಗಡೆ ಮಾಡಲಾಗಿದೆ.)

ಈ) ಮಾನ್ಯ ಮುಖ್ಯ ಮಂತ್ರಿಯವರು ಪ್ರಾಧಿಕಾರದ ಅಧ್ಯಕ್ಷರಾಗಿದ್ದು, ಅವರಿಂದ ಸಮಯ ನಿಗದಿಪಡಿಸಿಕೊಂಡು ಸಧ್ಯದಲ್ಲಿಯೇ ಸಭೆ ಕರೆಯಲಾಗುವುದು.

706 ಶ್ರೀ. ಸುನೀಲ್ ವಿ. ಹೆಗಡೆ (ಹಳಿಯಾಳ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಉತ್ತರ ಕನ್ನಡ ಜಿಲ್ಲೆಯ ಹಳಿಯಾಳ ತಾಲ್ಲೂಕಿನ ವ್ಯಾಪ್ತಿಗೆ ಬರುವ ಕಂದಾಯ ನಿರೀಕ್ಷಕರು ಹಾಗೂ ಗ್ರಾಮ ಲೆಕ್ಕಾಧಿಕಾರಿಗಳಿಗೆ ಸ್ವಂತ ಕಟ್ಟಡಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ; ಸ್ವಂತ ಕಟ್ಟಡಗಳನ್ನು ಹೊಂದಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

ಇ) ದಾಂಡೇಲಿಯ ನಾಡಕಛೇರಿಯ ಉಪ ತಹಶೀಲ್ದಾರ್, ಕಂದಾಯ ನಿರೀಕ್ಷಕರು ಮತ್ತು ಗ್ರಾಮ ಲೆಕ್ಕಾಧಿಕಾರಿಗಳಿಗೆ ಸ್ವಂತ ಕಟ್ಟಡಗಳಿಲ್ಲ ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಬಂದಿದ್ದಲ್ಲಿ, ಸ್ವಂತ ಕಟ್ಟಡಗಳನ್ನು ಹೊಂದಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;